RUSA GRANT ORDER COPY.

ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/412/ಸುತ್ತೋಲೆ/ 2015-16/ಶೈವಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-560001.
ದಿನಾಂಕ: .06.2015.

## "ಸುತ್ತೋಲೆ"

ವಿಷಯ: ರಾಷ್ಟ್ರೀಯ ಉಚ್ಚತರ ಶಿಕ್ಷಾ ಅಭಿಯಾನ (Rashtriya Ucchatar Shiksha Abhiyan - RUSA) ಯೋಜನೆಯಡಿಯಲ್ಲಿ ಆಯ್ಕೆಯಾಗಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅನುದಾನ ಮಂಜೂರಾಗಿರುವ ಬಗ್ಗೆ.

ಉಲ್ಲೇಖ: ದಿನಾಂಕ: 08.05.2015ರ ಕಾರ್ಯನಿರ್ವಾಹಕ ನಿರ್ದೇಶಕರು, ರಾಜ್ಯ ಉನ್ನತ ಶಿಕ್ಷಣ ಪರಿಷತ್ ಇವರ ಪತ್ರ ಸಂಖ್ಯೆ: KSHEC/RUSA-PAB meeting/2015-16/69.

******

ಉನ್ನತ ಶಿಕ್ಷಣ ಗುಣಮಟ್ಟವನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಇಲಾಖೆಯ ಮಹತ್ವಾಕಾಂಕ್ಷೆಯ ಯೋಜನೆಯಾದ ರಾಷ್ಟ್ರೀಯ ಉಚ್ಚತರ ಶಿಕ್ಷಾ ಅಭಿಯಾನ (Rashtriya Ucchatar Shiksha Abhiyan - RUSA) ಅಡಿಯಲ್ಲಿ ದಿನಾಂಕ: 27.03.2015ರಂದು ನಡೆದ 6ನೇ PAB ಸಭೆಯ ಅಧಿಕೃತ ನಡಾವಳಿಯನ್ವಯ ಇಲಾಖೆಯ ವ್ಯಾಪ್ತಿಗೊಳಪಡುವ 60 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಸದರಿ ಯೋಜನೆಯ ಕಾಂಪೊನೆಂಟ್-7 (Infrastructure Grants to the Colleges) ರಡಿಯಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ 12ನೇ ಪಂಚವಾರ್ಷಿಕ ಯೋಜನಾವಧಿಗೆ ತಲಾ ರೂ 2.00 ಕೋಟಿಗಳನ್ನು ನಿಗದಿಗೊಳಿಸಿದ್ದು . 2015-16ನೇ ಸಾಲಿಗೆ ತಲಾ ರೂ 1.00 ಕೋಟಿ ಅನುದಾನ ಮಂಜೂರಾತಿಗೆ ಅಧಿಕೃತ ಅನುಮೋದನೆ ದೊರೆತಿರುವುದರ ಕುರಿತು ಉಲ್ಲೇಖಿತ ಪತ್ರದೊಂದಿಗೆ ಲಗತ್ತಿಸಿರುವ ಸಭೆಯ ನಡಾವಳಿಗಳಲ್ಲಿ ತಿಳಿಸಲಾಗಿದೆ.

ರೂಸಾ ಅನುದಾನಕ್ಕೆ ಆಯ್ಕೆಯಾಗಿರುವ 60 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು (ಪಟ್ಟಿ ಲಗತ್ತಿಸಿದೆ) ನ್ಯಾಕ್ 'A' ಮತ್ತು 'B' ಶ್ರೇಣಿ ಹೊಂದಿದ್ದು, ಬಿಡುಗಡೆಯಾಗಲಿರುವ ಅನುದಾನವನ್ನು ರೂಸಾ ಮಾರ್ಗಸೂಚಿಯನ್ವಯ ಯಾವ ಉದ್ದೇಶಕ್ಕಾಗಿ ಅನುದಾನವನ್ನು ನಿಗದಿಪಡಿಸಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಹಾಗೂ ಕಾಲೇಜಿನ ಅಭಿವೃದ್ಧಿಗಾಗಿ ಬಳಕೆ ಮಾಡಲು ಸೂಚಿಸುತ್ತಾ , ಕೆಳಕಂಡ ಷರತ್ತುಗಳನ್ನು ತಪ್ಪದೇ ಪಾಲಿಸಲು ಸೂಚಿಸಲಾಗಿದೆ.

ಸಾಮಾನ್ಯ ಹಣಕಾಸಿನ ಪ್ರತ್ಯಾಯೋಜನೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ನಿಗದಿಪಡಿಸಲಾಗಿರುವ ಪ್ರತ್ಯಾಯೋಜಿತ ಅಧಿಕಾರದ ಮಿತಿಯಲ್ಲೇ ಅನುದಾನವನ್ನು ಬಳಸಿಕೊಳ್ಳುವಂತೆ ಸೂಚಿಸಲಾಗಿದೆ.

- ಎಲ್ಲಾ ಖರೀದಿ ಹಾಗೂ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆಧ್ಯಾದೇಶ 2000ರ (ಕೆ.ಟಿ.ಪಿ.ಪಿ) ಮತ್ತು ಅದರಡಿಯಲ್ಲಿನ ನಿಯಮಗಳನ್ನು ಚಾಚು ತಪ್ಪದೇ ಕಡ್ಡಾಯವಾಗಿ ಹಾಗೂ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
- ಈ ವೆಚ್ಚವನ್ನು ನಿಗದಿತ ಅವಧಿಯೊಳಗೆ ಎಲ್ಲಾ ಪ್ರಚಲಿತ ನಿಯಮಗಳನ್ನು ಪಾಲಿಸಿ ಭರಿಸುವುದು.

Principal
Government First Grade College
Channapatna - 562160.

- ಬಿಡುಗಡೆ ಮಾಡಲಾದ ಅನುದಾನದ ಖರ್ಚು-ವೆಚ್ಚಗಳನ್ನು ಲೆಕ್ಕ ತಪಾಸಣೆಗೆ ಒಳಪಡಿಸತಕ್ಕದ್ದು.
- ಬಿಡುಗಡೆ ಮಾಡಲಾದ ಅನುದಾನದ ಬಳಕೆಯ ಬಗ್ಗೆ ಕರ್ನಾಟಕ ಆರ್ಥಿಕ ಸಂಹಿತೆ, ನಿಯಮ 161 ರನ್ವಯ ನಿಗಧಿತ ನಮೂನೆಯಲ್ಲಿಯೇ "ಹಣ ಬಳಕೆಯ ಪ್ರಮಾಣ ಪತ್ರ" ಗಳನ್ನು ಸಿದ್ಧಪಡಿಸಿ ಪ್ರಾದೇಶಿಕ ಜಂಟಿ ನಿರ್ದೇಶಕರ ಮೇಲು ಸಹಿಯೊಂದಿಗೆ ಕಡ್ಡಾಯವಾಗಿ ನಿಗಧಿತ ಅವಧಿಯೊಳಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸಲ್ಲಿಸತಕ್ಕದ್ದು.

**"ಮಾನ್ಯ ಆಯುಕ್ತರಿಂದ ಒಪ್ಪಣೆ ಅನುಮೋದಿಸಲ್ಪಟ್ಟಿದೆ"**

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ,**

1. **ಜಂಟಿ ನಿರ್ದೇಶಕರು, ಬೆಂಗಳೂರು, ಮೈಸೂರು, ಧಾರವಾಡ, ಶಿವಮೊಗ್ಗ, ಮಂಗಳೂರು ಮತ್ತು ಕಲಬುರ್ಗಿ, ಮಾಹಿತಿ ಹಾಗೂ ಮುಂಬರುವ ಅನುದಾನವನ್ನು ರೂಸಾ ಮಾರ್ಗಸೂಚಿಗಳನ್ವಯ ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರು ಬಳಕೆ ಮಾಡುವಂತೆ ಕ್ರಮ ವಹಿಸಲು ಸೂಚಿಸಲಾಗಿದೆ.**
2. **ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ, ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.**

---

<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಕಾಶಿಇ/ಪ್ರಾಕಜಂ/ರೂಸಾ/ಅನುದಾನ ಬಿಡುಗಡೆ/2015-16

ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ,
ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-09
ದಿನಾಂಕ: 09-06-2015

ಮಾನ್ಯರೆ,

ಮೇಲ್ಕಂಡ ಮಾನ್ಯ ಆಯುಕ್ತರ ಆದೇಶದಂತೆ ರೂಸಾ ಯೋಜನೆಯಡಿ ಆಯ್ಕೆಯಾಗಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರುಗಳು ಸೂಕ್ತ ಕ್ರಮ ಕೈಗೊಂಡು ವರದಿಯನ್ನು ಈ ಕಛೇರಿಗೆ ಸಲ್ಲಿಸಲು ಈ ಸುತ್ತೋಲೆಯನ್ನು ಪರಿಚಲಿಸಲಾಗಿದೆ.

ಜಂಟಿ ನಿರ್ದೇಶಕರು
ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ
ಬೆಂಗಳೂರು - 560 009

<u>ಇವರಿಗೆ:</u>

1. ಪ್ರಾಂಶುಪಾಲರು, ಸರ್ಕಾರಿ ಕಲಾ ಕಾಲೇಜು, ಬೆಂಗಳೂರು
2. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೊಸಕೋಟೆ
3. ಪ್ರಾಂಶುಪಾಲರು, ಸರ್ಕಾರಿ ಬಾಲಕರ ಕಾಲೇಜು, ಚಿಂತಾಮಣಿ
4. ಪ್ರಾಂಶುಪಾಲರು, ಸರ್ಕಾರಿ ಮಹಿಳಾ ಕಾಲೇಜು, ಚಿಂತಾಮಣಿ
5. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚಿಕ್ಕಬಳ್ಳಾಪುರ
6. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಗುಬ್ಬಿ
7. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಾಲೂರು
8. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೆ.ಆರ್. ಪುರಂ, ಬೆಂ.
9. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಂಗಾರಪೇಟೆ
10. ಪ್ರಾಂಶುಪಾಲರು, ಸರ್ಕಾರಿ ಮಹಿಳಾ ಕಾಲೇಜು, ಕೋಲಾರ
11. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪಾವಗಡ
12. ಪ್ರಾಂಶುಪಾಲರು, ಸರ್ಕಾರಿ ಬಾಲಕರ ಕಾಲೇಜು, ಕೋಲಾರ
13. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೊರಟಗೆರೆ
14. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಶ್ರೀನಿವಾಸಪುರ
15. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ದೊಡ್ಡಬಳ್ಳಾಪುರ
16. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮುಳಬಾಗಿಲು
17. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚನ್ನಪಟ್ಟಣ
18. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸೂಲಿಬೆಲೆ
19. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಾಗಡಿ

ಪ್ರಾಂಶುಪಾಲರು
ಸರ್ಕಾರಿ ಪ್ರಥಮ ದರ್ಜೆ ಕಾಲೇಜು
ಚನ್ನಪಟ್ಟಣ - 571 501

New Building Construction Grant
Order Copy - ₹ 4.95 CRORE

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಉನ್ನತ ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿವಿಧ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ನಿರ್ವಹಿಸುವ ಕ್ರಿಯಾ ಯೋಜನೆಗೆ ಅನುಮೋದನೆ ನೀಡುವ ಬಗ್ಗೆ

ಓದಲಾಗಿದೆ: 1. 2018-19ನೇ ಸಾಲಿನ ಜುಲೈ ಮಾಹೆಯಲ್ಲಿ ಘೋಷಿಸಿರುವ ಆಯವ್ಯಯ ಭಾಷಣ ಕಂಡಿಕೆ 54ರಲ್ಲಿ "
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಕಾಶಿಇ/27/ಮೂಭೂಸೌ/ತಾಂ.ಕೋ/2018-19, ದಿನಾಂಕ:01.08.2018

******

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ 2018-19ನೇ ಸಾಲಿನ ಜುಲೈ ಮಾಹೆಯಲ್ಲಿ ಘೋಷಿಸಿರುವ ಆಯವ್ಯಯ ಭಾಷಣ ಕಂಡಿಕೆ 54ರಲ್ಲಿ " ರಾಜ್ಯದ ಸರ್ಕಾರಿ ಪದವಿ ಹಾಗೂ ಸ್ನಾತಕೋತ್ತರ ಕಾಲೇಜುಗಳಿಗೆ ಮೂಲಭೂತ ಸೌಕರ್ಯ ಅಭಿವೃದ್ಧಿ ಹಾಗೂ ಇತರೆ ದುರಸ್ತಿ ಕಾರ್ಯಗಳಿಗೆ ಆಯವ್ಯಯದಲ್ಲಿ 250 ಕೋಟಿ ರೂ.ಗಳನ್ನು ಒದಗಿಸಲಾಗುವುದು " ಎಂದು ಘೋಷಿಸಲಾಗಿದೆ. ದಿ:24.07.2018ರಂದು ನಡೆದ ಅಭಿವೃದ್ಧಿ ಕಾಮಗಾರಿಗಳ ಪರಿಶೀಲನಾ ಸಭೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕಟ್ಟಡ, ಹೆಚ್ಚುವರಿ ಕೊಠಡಿ, ಪ್ರಯೋಗಾಲಯ, ಶೌಚಾಲಯ ಹಾಗೂ ಇತರೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಹೊಸ ಕಾಮಗಾರಿಗಳಿಗೆ 2018-19ನೇ ಸಾಲಿನ ಲೆಕ್ಕಶೀರ್ಷಿಕೆ 4202-01-203-1-01-132ರಡಿ ಹೆಚ್ಚುವರಿಯಾಗಿ ರೂ.250.00ಕೋಟಿಗಳನ್ನು ಒದಗಿಸಿದ್ದು, ಇದರಲ್ಲಿ ರೂ.200.00ಕೋಟಿಗಳನ್ನು ಕಾಲೇಜು ಶಿಕ್ಷಣ ಇಲಾಖೆಗೆ ಮೀಸಲಿರಿಸಿ, ಇದರ 3 ಪಟ್ಟು ಅಂದರೆ ರೂ.600.00ಕೋಟಿಗಳ ಅನುದಾನದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಪ್ರಸ್ತಾವನೆ ಸಲ್ಲಿಸಲು ತಿಳಿಸಿದ್ದು, ಇನ್ನುಳಿದ ರೂ.50.00ಕೋಟಿಗಳನ್ನು ತಾಂತ್ರಿಕ ಶಿಕ್ಷಣ ಇಲಾಖೆಯ ಆಯವ್ಯಯ ಲೆಕ್ಕಶೀರ್ಷಿಕೆ:4202-02-104-1-03-386ಗೆ ವರ್ಗಾಯಿಸಿ ಇದರ ಮೂರು ಪಟ್ಟು ಅಂದರೆ ರೂ.150.00ಕೋಟಿ ಅನುದಾನದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿಗೆ ಹೆಚ್ಚುವರಿ ಕೊಠಡಿ, ಪ್ರಯೋಗಾಲಯ, ಶೌಚಾಲಯ ಹಾಗೂ ಇತರೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಪ್ರಸ್ತಾವನೆ ಸಲ್ಲಿಸಲು ಸರ್ಕಾರ ಸೂಚಿಸಿದ್ದು, ಅದರಂತೆ ಕಾಲೇಜು ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ರೂ.600.00ಕೋಟಿಗಳ ಪ್ರಸ್ತಾವನೆಯನ್ನು ಆಯುಕ್ತರು ಕಾಲೇಜು ಶಿಕ್ಷಣ ಇಲಾಖೆ ಇವರು ಸಲ್ಲಿಸಿ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ ಇಡಿ 77 ಹೆಚ್‌ಪಿಸಿ 2018, ಬೆಂಗಳೂರು, ದಿನಾಂಕ: 15.12.2018

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2018-19ನೇ ಸಾಲಿನ ಕಾಲೇಜು ಶಿಕ್ಷಣ ಇಲಾಖೆಯ ಆಯವ್ಯಯ ಲೆಕ್ಕಶೀರ್ಷಿಕೆ 4202-01-203-1-01-132ರಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಅನುಬಂಧ-1ರಲ್ಲಿ ನೀಡಿರುವ ಪ್ಯಾಕೇಜ್ ಸಂಖ್ಯೆ:10 ಮತ್ತು 12ರಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕಟ್ಟಡ, ಹೆಚ್ಚುವರಿ ಕೊಠಡಿ, ಪ್ರಯೋಗಾಲಯ, ಶೌಚಾಲಯ ಹಾಗೂ ಇತರೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕಾಮಗಾರಿಗಳನ್ನು ಈ ಕೆಳಕಂಡ ಷರತ್ತುಗಳ ಆಧಾರ ತೆಗೆದುಕೊಳ್ಳುವ ಕ್ರಿಯಾಯೋಜನೆಗೆ ಅನುಮೋದನೆ ನೀಡಿ ಆದೇಶಿಸಿದೆ.

Principal
Government First Grade College
Channapatna - 562160.

ಷರತ್ತುಗಳು:

1. ಕೆ.ಟಿ.ಪಿ.ಪಿ. 1999 ಕಾಯ್ದೆಯ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು.
2. ಅಂದಾಜು ಪಟ್ಟಿಗಳನ್ನು ಮತ್ತೊಮ್ಮೆ ಪರಿಶೀಲಿಸಿ ಸಂಬಂಧಪಟ್ಟ ಪ್ರಾಧಿಕಾರಗಳಿಂದ ತಾಂತ್ರಿಕ ಅನುಮೋದನೆ ಪಡೆಯುವುದು
3. ಸದರಿ ಕಾಮಗಾರಿಗಳನ್ನು ಲೋಕೋಪಯೋಗಿ ಇಲಾಖೆಯಿಂದ ನಿರ್ವಹಿಸುವುದು.
4. ಕಟ್ಟಡ ಕಾಮಗಾರಿಗಳ ಗುಣಮಟ್ಟದ ಬಗ್ಗೆ ತೃತೀಯ ಪಾರ್ಟಿ ಮೌಲ್ಯಮಾಪನ ಮಾಡಿಸಿ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳುವುದು.
5. ಪ್ರಸ್ತುತ ಸಾಲಿಗೆ ಈಗಾಗಲೇ ಕ್ರಿಯಾ ಯೋಜನೆಯಲ್ಲಿ ಕೆಲವು ಕಾಮಗಾರಿಗಳನ್ನು ಅನುಮೋದಿಸಿದ ಕಾಮಗಾರಿಗಳನ್ನು ಪರಿಗಣಿಸಲಾಗಿದೆ. ಬಾಕಿ ಕಾಮಗಾರಿಗಳನ್ನು ಈ ಆದೇಶದ ಕ್ರಿಯಾಯೋಜನೆಯಲ್ಲಿ ಪರಿಗಣಿಸುವುದು.
6. ಪ್ರಸ್ತುತ ಸಾಲಿಗೆ 2018-19ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ 4202-01-203-1-01-132ರಡಿಯಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಹೊಸ ಕಾಮಗಾರಿಗಳಿಗೆ ನಿಗದಿಪಡಿಸಿದ ರೂ.200.00ಕೋಟಿಗಳನ್ನು ಮಾತ್ರ ನಿಯಮಾನುಸಾರ ಬಿಡುಗಡೆ ಮಾಡುವುದು.
7. ಮುಂದಿನ ಸಾಲುಗಳ ಆಯವ್ಯಯದಲ್ಲಿ ಹೊಸ ಕಾಮಗಾರಿಗಳನ್ನು ಪೂರ್ಣಗೊಳಿಸಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ, ಆಯವ್ಯಯ ಪೂರ್ವಭಾವಿ ಸಭೆಯಲ್ಲಿ ಮಂಡಿಸಿ ಅಗತ್ಯ ಅನುದಾನವನ್ನು ನಿಗದಿಪಡಿಸಿಕೊಳ್ಳುವುದು
8. ಯಾವುದೇ ಕಾಮಗಾರಿಯ ಅನುಮೋದಿತ ಅಂದಾಜು ಮೊತ್ತ ಮೀರತಕ್ಕದಲ್ಲ.
9. ನಿಯಮಾನುಸಾರ ಪರಿಶೀಲಿಸಿ ಶೀಘ್ರ ಆಡಳಿತಾತ್ಮಕ ಅನುಮೋದನೆ ನೀಡುವಲ್ಲಿ ಅಗತ್ಯ ಕ್ರಮ ವಹಿಸಿ ಕಾಮಗಾರಿಗಳನ್ನು ಶೀಘ್ರವಾಗಿ ಪ್ರಾರಂಭಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 1111 ವೆಚ್ಚ-8/2018 ದಿ:07.12.2018ರಲ್ಲಿ ನೀಡಿದ ಸಹಮತಿಯನ್ವಯ ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಯೋಇ/99/ಜಶಉ/2018 ದಿ:20.10.2018ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

15/12/18

(ಎಂ.ಎ.ಅಹಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
(ವಿಶ್ವವಿದ್ಯಾಲಯ-2 ಹಾಗೂ ಯೋಜನೆ)

ಪ್ರತಿಯನ್ನು:

1. ಮಹಾಲೇಖಪಾಲರು, ಕರ್ನಾಟಕ (ಆಡಿಟ್ 1 ಮತ್ತು 2), ಬೆಂಗಳೂರು.
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ ಅವರ ಆಪ್ತ ಕಾರ್ಯದರ್ಶಿಗಳು.
5. ಉಪನಿರ್ದೇಶಕರು, ಖಜಾನೆ ಗಣಕ ಕೇಂದ್ರ, ನಂ.49, ಖನಿಜ ಭವನ ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಉನ್ನತ ಶಿಕ್ಷಣ) ಶಿಕ್ಷಣ ಇಲಾಖೆ ಅವರ ಆಪ್ತ ಕಾರ್ಯದರ್ಶಿಗಳು.
8. ಸಮನ್ವಯಾಧಿಕಾರಿಗಳು, ಮಾಹಿತಿ ಕೇಂದ್ರ, ಉನ್ನತ ಶಿಕ್ಷಣ ಇಲಾಖೆ.
9. ಹೆಚ್ಚುವರಿ ಪ್ರತಿಗಳು

ಸರ್ಕಾರದ ಆದೇಶ ಸಂಖ್ಯೆ ಇಡಿ 77 ಹೆಚ್‌ಪಿಸಿ 2018, ಬೆಂಗಳೂರು, ದಿನಾಂಕ: 15.12.2018ರ

ಪ್ಯಾಕೇಜ್-10 ಮತ್ತು 12 ಕ್ಕೆ ಅನುಬಂಧ

| Sl No | College Sl. No. | District | Name of the College | Total Amount (Rs. In Lakhs) |
|---|---|---|---|---|
| 189 | 126 | Chikkamagaluru | 173 I.D.S.G.Govt. College, Chikkamagalur | 770.00 |
| 190 | 127 | Chikkamagaluru | 174 G.F.G.C., Koppa | 340.00 |
| 191 | 131 | Chikkamagaluru | 177 G.F.G.C., Ajjampura | 80.00 |
| 192 | 134 | Chikkamagaluru | 178 G.F.G.C., Panchanahalli | 80.00 |
| 193 | 138 | Chikkamagaluru | 179 G.F.G.C., Kadur | 455.00 |
| 194 | 140 | Chikkamagaluru | 180 G.F.G.C., Sringeri | 180.00 |
| 195 | 141 | Chikkamagaluru | 181 G.F.G.C., Tarikere | 225.00 |
| 196 | 143 | Chikkamagaluru | 182 G.F.G.C., Kalasa | 50.00 |
| 197 | 145 | Chikkamagaluru | 183 G.F.G.C., Birur | 115.00 |
| 198 | 147 | Chikkamagaluru | 185 G.F.G.C., Sakarayapatna | 105.00 |
| 199 | 207 | Hassan | 112 Govt. Science College, Hassan | 665.00 |
| 200 | 208 | Hassan | 113 Govt. Arts College, Hassan | 380.00 |
| 201 | 209 | Hassan | 114 G.F.G.C.W., Hassan | 410.00 |
| 202 | 212 | Hassan | 119 G.F.G.C., Sakaleshpura | 130.00 |
| 203 | 213 | Hassan | 120 G.F.G.C., Arkalgudu | 185.00 |
| 204 | 216 | Hassan | 122 G.F.G.C., Jawagal | 80.00 |
| 205 | 218 | Hassan | 124 G.F.G.C., Channarayapatna | 400.00 |
| 206 | 219 | Hassan | 126 G.F.G.C., Arasikere | 200.00 |
| 207 | 220 | Hassan | 127 Govt. Home Science College, Hassan | 175.00 |
| 208 | 221 | Hassan | 131 G.F.G.C., Baanavara | 75.00 |
| 208/1 | | Hassan | G.F.G.C., Jajur | 200.00 |
| 208/2 | | Hassan | G.F.G.C., Banavara | 100.00 |
| 208/3 | | Hassan | G.F.G.C., Gandasi sante mydhana | 200.00 |

| Sl no | Clg.no | District | Name of college(Already approved list Ramanagar & Hassan) | Total amount (Rs.in lakhs) |
|---|---|---|---|---|
| 1 | 8 | Hassan | Home science college, Holenarasipura | 100.00 |
| 2 | | Hassan | G.F.G.C., Padavalahippa | 150.00 |
| 3 | | Hassan | G.F.G.C.W, Gandadakoti, Hassan | 350.00 |
| 4 | | Hassan | Govt Law college, Holenarasipura | 100.00 |
| 5 | | Hassan | G.F.G.C., Mosalehosalli | 20.00 |
| 6 | | Hassan | Govt. Science college, Holenarasipura | 70.00 |
| 7 | | Hassan | G.F.G.C., Halebidu | 200.00 |

Principal
Government First Grade College
Channapatna - 562160.

| Sl no | Clg.no | District | Name of college(Already approved list) | Total amount (Rs.in lakhs) |
|---|---|---|---|---|
| | | Hassan | G.F.G.C., Hettur | 200.00 |
| | | Hassan | G.F.G.C., Holenarasipura | 400.00 |
| | | Hassan | G.F.G.C.W, Holenarasipura | 300.00 |
| | | Hassan | G.F.G.C., Holenarasipura | 200.00 |
| | 09 | Hassan | G.F.G.C., Udayapura | 275.00 |
| | 11 | Hassan | Haradanahalli Residential College | 1500.00 |
| 1 | 11 | Hassan | G.F.G.C.,Ramanagar | 495.00 |
| 2 | 8 | Ramanagar | G.F.G.C.W, Ramanagar | 495.00 |
| 3 | | Ramanagar | G.F.G.C.W, Ramanagar | 295.00 |
| 4 | | Channapatana | G.F.G.C., Channapatana | 495.00 |

15/12/18

(ಎಂ.ಎ.ಅಹಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
(ವಿಶ್ವವಿದ್ಯಾಲಯ-2 ಹಾಗೂ ಯೋಜನೆ)

**Principal**
Government First Grade College
Channapatna - 562160.

New Building Construction order Copy

361
16-01-19

ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

**ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ನಡವಳಿಗಳು**

ವಿಷಯ: 2018-19ನೇ ಸಾಲಿನ ರಾಮನಗರ ಜಿಲ್ಲೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳ ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ:1.ಈ ಇಲಾಖೆಯ ಪತ್ರದ ಸಂಖ್ಯೆ:ಕಾಶಿಇ:41:ರಾಜಿಕಾ:ತಾಂ.ಕೋ:2018-19, ದಿನಾಂಕ:11-09-2018

2. ಸರ್ಕಾರದ ಆದೇಶ ಸಂಖ್ಯೆ:ಇಡಿ:92:ಹೆಚ್‌ಪಿಸಿ:2018.ದಿನಾಂಕ: 27-11-2018.

* * * * *

## ಪ್ರಸ್ತಾವನೆ:

2018-19ನೇ ಸಾಲಿನಲ್ಲಿ ರಾಮನಗರ ಜಿಲ್ಲೆಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಕಾರ್ಯ ಪಾಲಕ ಅಭಿಯಂತರರು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, ರಾಮನಗರ ವಿಭಾಗ, ರಾಮನಗರ ಇವರ ಪ್ರಸ್ತಾವನೆ ಮೇರೆಗೆ ಏಕ ಕಡತ ಸಂಖ್ಯೆ: ಕಾಶಿಇ:41:ರಾಜಿಕಾಂ:ತಾಂಕೋ:2018-19 ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ರಾಮನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ಕಾಮಗಾರಿಗಳ ಅಂದಾಜು ರೂ.495.00ಲಕ್ಷಗಳು, ರಾಮನಗರ (ರಾಯರದೊಡ್ಡಿ) ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಕಟ್ಟಡ ಕಾಮಗಾರಿಯ ಅಂದಾಜು ರೂ.495.00ಲಕ್ಷಗಳು, ರಾಮನಗರ (ರಾಯರದೊಡ್ಡಿ) ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ವಿವಿಧ ಮೂಲಭೂತ ಸೌಲಭ್ಯಗಳ ಕಾಮಗಾರಿಗಳ ಅಂದಾಜು ರೂ.295.00ಲಕ್ಷಗಳ ಹಾಗೂ ಚನ್ನಪಟ್ಟಣ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಹೆಚ್ಚುವರಿ ಕೊಠಡಿ ನಿರ್ಮಿಸಲು ಅಂದಾಜು ರೂ.495.00ಲಕ್ಷಗಳ ವೆಚ್ಚದಲ್ಲಿ ಒಟ್ಟಾರೆ ರೂ.1780.00ಲಕ್ಷಗಳ ಕಾಮಗಾರಿಗಳಿಗೆ ಮುಖ್ಯ ಅಭಿಯಂತರರಿಂದ ತಾಂತ್ರಿಕ ಮಂಜೂರಾತಿಯನ್ನು ಪಡೆಯುವ ಷರತ್ತನ್ನು ವಿಧಿಸಲಾಗಿದ್ದು, ಅದರಂತೆ ಈ ಕಛೇರಿಯಿಂದ ಆಡಳಿತಾತ್ಮಕ ಅನುಮೋದನೆ ನೀಡಲು ಈ ಆದೇಶ.

**ಆದೇಶ ಸಂಖ್ಯೆ: ಕಾಶಿಇ:41ತಾಂ.ಕೋ:2018-19:ಬೆಂಗಳೂರು, ದಿನಾಂಕ: 7/01/2019**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ರಾಮನಗರ ಜಿಲ್ಲೆಯಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಇಲ್ಲಿನ ರಾಮನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ಕಾಮಗಾರಿಗಳ ಅಂದಾಜು ರೂ.495.00ಲಕ್ಷಗಳು, ರಾಮನಗರ (ರಾಯರದೊಡ್ಡಿ) ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಕಟ್ಟಡ ಕಾಮಗಾರಿಯ ಅಂದಾಜು ರೂ.495.00ಲಕ್ಷಗಳು, ರಾಮನಗರ (ರಾಯರದೊಡ್ಡಿ) ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ವಿವಿಧ ಮೂಲಭೂತ ಸೌಲಭ್ಯಗಳ ಕಾಮಗಾರಿಗಳ ಅಂದಾಜು ರೂ.295.00ಲಕ್ಷಗಳ ಹಾಗೂ ಚನ್ನಪಟ್ಟಣ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಹೆಚ್ಚುವರಿ ಕೊಠಡಿ ನಿರ್ಮಿಸಲು ಅಂದಾಜು ರೂ.495.00ಲಕ್ಷಗಳ ವೆಚ್ಚದಲ್ಲಿ ಒಟ್ಟಾರೆ ರೂ.1780.00ಲಕ್ಷಗಳ (ರೂ.ಹದಿನೇಳು ಕೋಟಿ ಎಂಬತ್ತು ಲಕ್ಷಗಳು ಮಾತ್ರ) ಗಳಿಗೆ ಉಲ್ಲೇಖಿತ ಸರ್ಕಾರದ ಆದೇಶದ ಅನುಮತಿ ಮೇರೆಗೆ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ರಾಮನಗರ ವಿಭಾಗ, ರಾಮನಗರ ಇವರಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

14/1

To be f...

### :: ಷರತ್ತುಗಳು ::

- ಕಟ್ಟಡದ ನಕ್ಷೆಯು ಕಾಲೇಜಿನ ಮಾಸ್ಟರ್ ಪ್ಲಾನ್‌ಗೆ ಅನುಗುಣವಾಗಿ ಅಳವಡಿಸತಕ್ಕದ್ದು ಹಾಗೂ ಕಟ್ಟಡದ ಪ್ಲಾನ್‌ಅನ್ನು ಕಾಲೇಜಿನ ಪ್ರಾಂಶುಪಾಲರೊಂದಿಗೆ ಸಮಾಲೋಚಿಸಿ ಅಂತಿಮಗೊಳಿಸುವುದು.
- ಕಟ್ಟಡದ ಸ್ಥಳ ಪರಿಶೀಲಿಸಿ ಅದರ ಕ್ಷೇಮದಾರಣೆ ಬಗ್ಗೆ ಮರು ಪರಿಶೀಲಿಸಿ ಅಂದಾಜು ಪಟ್ಟಿಗೆ ತಾಂತ್ರಿಕ ಅನುಮೋದನೆ ಪಡೆಯತಕ್ಕದ್ದು.
- ಕಟ್ಟಡದ ವಿನ್ಯಾಸಗಳನ್ನು ನೆಲಮಹಡಿ + ಎರಡು ಮಹಡಿಗಳಿಗೆ ತಯಾರಿಸಿ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ಅಂದಾಜು ಪಟ್ಟಿಗೆ ತಾಂತ್ರಿಕ ಅನುಮೋದನೆ ಪಡೆಯುವ ಷರತ್ತಿಗೆ

10801

- ಕಾಮಗಾರಿಯನ್ನು ಪ್ರಾರಂಭಿಸುವ ಮುನ್ನ ವಿವರವಾದ ವಿದ್ಯುಚ್ಛಕ್ತಿ ಕಾಮಗಾರಿಯ ಅಂದಾಜು ಪಟ್ಟಿಗೆ ತಾಂತ್ರಿಕ ಅನುಮೋದನೆ ಪಡೆಯುವ ಷರತ್ತಿಗೆ ಒಳಪಟ್ಟಿದೆ.
- ಕಟ್ಟಡ ನಿರ್ಮಾಣ ಕಾರ್ಯವನ್ನು ವಹಿಸುವಾಗ ಪ್ರಚಲಿತ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ ಹಾಗೂ ಇತರೆ ಸಂಬಂಧಿಸಿದ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
- ಕಾಮಗಾರಿ ಆದೇಶದ ಪ್ರತಿಯನ್ನು ಕಡ್ಡಾಯವಾಗಿ ಈ ಕಛೇರಿಗೆ ಸಲ್ಲಿಸತಕ್ಕದ್ದು.
- ಪ್ರತಿಯೊಂದು ಕಾಮಗಾರಿಯನ್ನು ನಿಗದಿತ ಕಾಲಮಿತಿ ಮತ್ತು ಅನುದಾನದ ಮಿತಿಯೊಳಗೆ ಪೂರ್ಣಗೊಳಿಸಲು ಹಾಗೂ ಹೆಚ್ಚುವರಿ ಅನುದಾನ ಕೋರದಂತೆ ಕಡ್ಡಾಯವಾಗಿ ಸೂಚಿಸಲಾಗಿದೆ.
- ಕಟ್ಟಡ ಕಾಮಗಾರಿಯನ್ನು ನೀಡಿರುವ ವೆಚ್ಚದಲ್ಲಿಯೇ ಮೂರು ಹಂತಗಳಲ್ಲಿ ತೃತೀಯ ಏಜನ್ಸಿಯಿಂದ ಗುಣ ನಿಯಂತ್ರಣ ವರದಿಯನ್ನು ಕಡ್ಡಾಯವಾಗಿ ಪಡೆದು ವರದಿಗಳನ್ನು ವಿವಿಧ ಹಂತಗಳ ಛಾಯಾ ಚಿತ್ರಗಳನ್ನು (ದಿನಾಂಕದೊಂದಿಗೆ) ಕೂಡಲೇ ಸಲ್ಲಿಸಲುವ ನಿಬಂಧನೆಗೆ ಒಳಪಟ್ಟಿರುತ್ತದೆ.
- ನಿಗಧಿತ ಅವಧಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸದ ಪ್ರಕರಣಗಳಲ್ಲಿ ಸಂಬಂಧಪಟ್ಟ ಗುತ್ತಿಗೆದಾರರಿಗೆ ನಿಯಮಾನುಸಾರ ದಂಡ ವಿಧಿಸಿ ಅದರ ದಾಖಲೆಗಳನ್ನು ಈ ಕಛೇರಿಗೆ ಒದಗಿಸತಕ್ಕದ್ದು.
- ಕಾಮಗಾರಿ ಪೂರ್ಣಗೊಂಡ ವರದಿಯನ್ನು ನಿಗಧಿತ ನಮೂನೆಯಲ್ಲಿ (Project Completion Report) ಛಾಯಾ ಚಿತ್ರಗಳೊಂದಿಗೆ ಕೇಂದ್ರ ಕಛೇರಿಯ ತಾಂತ್ರಿಕ ಕೋಶದ ವಿಭಾಗಕ್ಕೆ ಸಲ್ಲಿಸಲು ಸೂಚಿಸಿದೆ.
- ಕಟ್ಟಡವನ್ನು ಪೂರ್ಣಗೊಳಿಸಿ ಪ್ರಾಂಶುಪಾಲರಿಗೆ ಹಸ್ತಾಂತರಿಸಿದ ವರದಿಯನ್ನು (Handing Over Report) ಹಾಗೂ ಮೂರು ವರ್ಷ ಕಡ್ಡಾಯ ನಿರ್ವಹಣಾ ಅವಧಿಯ ಷರತ್ತಿಗೆ ಒಳಪಟ್ಟಿರುತ್ತದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಮುಖ್ಯ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ) ಕೆ.ಆರ್.ವೃತ್ತ ಬೆಂಗಳೂರು.
2. ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, ರಾಮನಗರ ವಿಭಾಗ, ರಾಮನಗರ.
3. ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ರಾಮನಗರ, ರಾಮನಗರ (ರಾಯರದೊಡ್ಡಿ)ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚನ್ನಪಟ್ಟಣ ಇವರಿಗೆ ಕಾಮಗಾರಿ ಅನುಷ್ಠಾನಗೊಳಿಸಲು ಸೂಚಿಸಿದೆ ಹಾಗೂ ಕಾಮಗಾರಿಯ ಪ್ರಗತಿಗೆ ಸಂಬಂಧಿಸಿದಂತೆ ಪ್ರತ್ಯೇಕ ಕಡತ ನಿರ್ವಹಿಸಿ ತಿಂಗಳಗೊಮ್ಮೆ ಫೋಟೋ ಪ್ರತಿಯೊಂದಿಗೆ ಕಟ್ಟಡ ಪ್ರಗತಿಯ ಬಗ್ಗೆ ಈ ಕಛೇರಿಗೆ ಮಾಹಿತಿ ನೀಡುವುದು.

ಪ್ರತಿ ರವಾನೆ ಮಾಹಿತಿಗಾಗಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, (ಉನ್ನತ ಶಿಕ್ಷಣ),ಬಹುಮಹಡಿ ಕಟ್ಟಡ,ಬೆಂಗಳೂರು-1
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಕೊಠಡಿ ಸಂಖ್ಯೆ:344-344ಎ, ವಿಧಾನಸೌಧ, ಬೆಂಗಳೂರು-01
3. ಮಾನ್ಯ ಲೋಕೋಪಯೋಗಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು-01.
4. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-ಇವರಿಗೆ ಎಲ್ಲಾ ಮೂಲಭೂತ ಸೌಲಭ್ಯಗಳ ಕಾಮಗಾರಿಗಳ ಬಗ್ಗೆ ಸೂಕ್ತ ನಿಗಾವಹಿಸಲು ಸೂಚಿಸಿದೆ.
5. ಕಛೇರಿ ಪ್ರತಿ.

ಪ್ರಾಂಶುಪಾಲರು
ಸರ್ಕಾರಿ ಪ್ರಥಮ ದರ್ಜೆ ಕಾಲೇಜು
ಚನ್ನಪಟ್ಟಣ - 571 501